**Akashvani : Bangalore**
**Regional Bulletin In Kannada**
**12.10.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**12.10.2025 / 2.30 pm**

**<><*<><>*><>**

ಮುಖ್ಯಾಂಶಗಳು

೧. ಸರ್ಕಾರಿ ಜಾಗದಲ್ಲಿ ಆರ್‌ಎಸ್‌ಎಸ್ ಚಟುವಟಿಕೆ ನಿಷೇಧಿಸುವಂತೆ ಮುಖ್ಯಮಂತ್ರಿಗೆ ಸಚಿವ ಪ್ರಿಯಾಂಕ್ ಖರ್ಗೆ ಪತ್ರ

೨. ಬೆಂಗಳೂರಿನ ಜೆಪಿ ಪಾರ್ಕ್‌ನಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೩. ಇಂದು ಬಿಜೆಪಿ ಕೋರ್ ಕಮಿಟಿ ಸಭೆ ; ಅತಿವೃಷ್ಟಿ, ಜಿಬಿಎ ಚುನಾವಣೆ ಕುರಿತಂತೆ ಚರ್ಚೆ

೪. ಎರಡನೇ ಟೆಸ್ಟ್ ಕ್ರಿಕೆಟ್; ವೆಸ್ಟ್ ಇಂಡೀಸ್ ವಿರುದ್ಧ ಫಾಲೋ ಆನ್ ಹೇರಿದ ಭಾರತ

****************

ಸರ್ಕಾರಿ ಜಾಗದಲ್ಲಿ ಆರ್‌ಎಸ್‌ಎಸ್ ಚಟುವಟಿಕೆ ನಿಷೇಧಿಸುವಂತೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಸರ್ಕಾರಿ ಶಾಲೆಗಳು, ಸರ್ಕಾರದ ಅನುದಾನಿತ ಶಾಲೆಗಳು ಮತ್ತು ಮೈದಾನಗಳು, ಉದ್ಯಾನವನಗಳು, ಮುಜುರಾಯಿ ಇಲಾಖೆ ದೇವಾಲಯಗಳು ಪುರಾತತ್ವ ಇಲಾಖೆಯ ಸ್ಥಳಗಳು ಸೇರಿದಂತೆ ಯಾವುದೇ ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್ ಎಸ್ ಸಂಘಟನೆಯ ಶಾಖೆ, ಬೈಠಕ್ ಹೆಸರಲ್ಲಿ ನಡೆಸುವ ಎಲ್ಲಾ ಬಗೆಯ ಚಟುವಟಿಕೆಗಳಿಗೆ ನಿಷೇಧ ಹೇರಬೇಕು ಎಂದು ಕೋರಿದ್ದಾರೆ. ಅನುಮತಿ ಪಡೆಯದೆ ಆರ್‌ಎಸ್‌ಎಸ್ ಸಂಘಟನೆ ಅಕ್ರಮಣಕಾರಿ ಪ್ರದರ್ಶನ ನಡೆಸುವ ಮೂಲಕ ಮಕ್ಕಳು ಹಾಗೂ ಯುವಜನರ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಹಾಗೂ ಆರ್‌ಎಸ್‌ಎಸ್ ಸಂವಿಧಾನ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ. ಪತ್ರವನ್ನು ಪರಿಗಣಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

****************

ಬೆಂಗಳೂರು ನಡಿಗೆ ಕಾರ್ಯಕ್ರಮದ ಅಂಗವಾಗಿ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಇಂದು ಜೆಪಿ ಪಾರ್ಕ್ ಉದ್ಯಾನದಲ್ಲಿ ಜನಸಾಮಾನ್ಯರ ಜತೆ ಹೆಜ್ಜೆ ಹಾಕಿ ಅಹವಾಲು ಆಲಿಸಿದರು. ಬೆಂಗಳೂರಿನ ಉದ್ಯಾನವನಗಳಲ್ಲಿ ನಾಗರಿಕರು ಹಾಗೂ ವಾಯು ವಿಹಾರಿಗಳ ಸಮಸ್ಯೆ ಆಲಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದ್ದು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಾಗರಿಕರಿಂದ ಸಲಹೆಗಳನ್ನು ಸ್ವೀಕರಿಸಿದರು.

**ಧ್ವನಿ : ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ( ೩೮ ಸೆಕೆಂಡುಗಳು)**

ಈ ವೇಳೆ  ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್,  ನಗರ ಪಾಲಿಕೆ ಆಯುಕ್ತರಾದ ರಾಜೇಂದ್ರ ಚೋಳನ್, ಪೊಮ್ಮಲ ಸುನೀಲ್ ಕುಮಾರ್, ಸೇರಿದಂತೆ ಹಲವರು  ಉಪಸ್ಥಿತರಿದ್ದರು.

****************

ಬೆಂಗಳೂರು ಉತ್ತರ ನಗರ ಪಾಲಿಕೆಯ ಸರ್ವಜ್ಞ ನಗರ ವ್ಯಾಪ್ತಿಯಲ್ಲಿ ಮಧ್ಯರಾತ್ರಿಯಲ್ಲಿ ನಡೆಸಲಾದ ಸಾಮೂಹಿಕ ಸ್ವಚ್ಛತಾ ಕಾರ್ಯದಲ್ಲಿ ೫೮ ಟನ್ ತ್ಯಾಜ್ಯ ತೆರವುಗೊಳಿಸಲಾಗಿದೆ. ನಗರದ ಸ್ವಚ್ಛತೆ ಮತ್ತು ಸೌಂದರ್ಯ ಹೆಚ್ಚಿಸುವ ಉದ್ದೇಶದಿಂದ, ಕಳೆದ ರಾತ್ರಿ ಉತ್ತರ ನಗರ ಪಾಲಿಕೆ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್, ನೇತೃತ್ವದಲ್ಲಿ ರಾಮಮೂರ್ತಿ ನಗರ ಸೇತುವೆಯಿಂದ ವೀರಣ್ಣಪಾಳ್ಯ ಜಂಕ್ಷನ್ ವರೆಗೆ ಸುಮಾರು ೬.೧ ಕಿಲೋ ಮೀಟರ್ ತೀವ್ರ ಸಾಮೂಹಿಕ ಸ್ವಚ್ಛತಾ ಅಭಿಯಾನ ನಡೆಸಲಾಯಿತು. ಅಭಿಯಾನದ ವೇಳೆ ಒಟ್ಟು ೬೫ ಆಟೋ ಟಿಪ್ಪರ್‌ಗಳು, ೧೬ ಟ್ರ್ಯಾಕ್ಟರ್‌ಗಳು, ೨ ಕಾಂಪ್ಯಾಕ್ಟರ್‌ಗಳು, ೨ ಜೆಟ್ಟಿಂಗ್ ಯಂತ್ರ, ೪ ಮೆಕಾನಿಕಲ್ ಸ್ವೀಪಿಂಗ್ ಯಂತ್ರ ಮತ್ತು ೩ ಜೆಸಿಬಿಗಳನ್ನು ಬಳಸಿ ವ್ಯಾಪಕ ಹೂಳು ಮತ್ತು ಕಸ ತೆರವು ಕಾರ್ಯ ನಡೆದಿದೆ.

****************

ಮೆಟ್ರೋ ಹಳದಿ ಮಾರ್ಗದ ರೈಲು ಸಂಚಾರದಲ್ಲಿ ಇಂದು ವ್ಯತ್ಯಯ ಉಂಟಾಗಿದೆ. ಒಂದು ರೈಲಿನಲ್ಲಿ ತಾಂತ್ರಿಕ ದೋಷ ಉಂಟಾಗಿರುವ ಕಾರಣ ೧೦ ಗಂಟೆ ೧೫ ನಿಮಿಷದಿಂದ ಹಳದಿ ಮಾರ್ಗದ ರೈಲುಗಳು ೨೫ ನಿಮಿಷಗಳ ಅಂತರದಲ್ಲಿ ಸಂಚರಿಸುತ್ತಿವೆ. ಪ್ರಯಾಣಿಕರು ಈ ಕುರಿತು ಗಮನಿಸಿ ಇದರಿಂದ ಉಂಟಾಗಿರುವ ಅನಾನುಕೂಲತೆಗೆ ಸಹಕರಿಸಬೇಕೆಂದು ಮೆಟ್ರೋ ಅಧಿಕಾರಿಗಳು ಸಾಮಾಜಿಕ ಜಾಲತಾಣದಲ್ಲಿ ಮನವಿ ಮಾಡಿದ್ದಾರೆ. ಆರ್.ವಿ.ರಸ್ತೆಯಿಂದ ಬೊಮ್ಮಸಂದ್ರ ನಡುವಿನ ಹಳದಿ ಮಾರ್ಗದಲ್ಲಿ ಒಟ್ಟು ೪ ರೈಲುಗಳು ಸಂಚಾರ ನಡೆಸುತ್ತಿದ್ದವು. ಈ ಪೈಕಿ ೧ ರೈಲಿನಲ್ಲಿ ತಾಂತ್ರಿಕ ಸಮಸ್ಯೆ ಕಾಣಿಸಿಕೊಂಡಿರುವ ಕಾರಣ ಈಗ ೩ ಮೆಟ್ರೋ ರೈಲುಗಳು ಮಾತ್ರ ಓಡಾಟ ನಡೆಸುತ್ತಿವೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

****************

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಇಂದು ಸಂಜೆ ರಾಜ್ಯ ಬಿಜೆಪಿ ಕೋರ್ ಕಮಿಟಿ ಸಭೆ ನಡೆಯಲಿದೆ. ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅಗರ್ವಾಲ್ ಸಭೆಯ ನೇತೃತ್ವ ವಹಿಸಲಿದ್ದಾರೆ. ಅತಿವೃಷ್ಟಿಯಿಂದ ಆಗಿರುವ ಬೆಳೆನಷ್ಟ, ಬೆಂಗಳೂರಿನ ರಸ್ತೆಗುಂಡಿ, ಸುರಂಗ ಮಾರ್ಗ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಚುನಾವಣೆ ಸೇರಿದಂತೆ ಹಲವು ಪ್ರಮುಖ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಮಾಜಿ ಮುಖ್ಯಮಂತ್ರಿಗಳಾದ ಬಿಎಸ್ ಯಡಿಯೂರಪ್ಪ, ಡಿ. ವಿ ಸದಾನಂದ ಗೌಡ, ಬಸವರಾಜ ಬೊಮ್ಮಾಯಿ, ಪ್ರತಿಪಕ್ಷ ನಾಯಕ ಆರ್. ಅಶೋಕ ಮುಂತಾದವರು ಇಂದಿನ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

****************

ಹಾಸನಾಂಬೆಯ ದರ್ಶನಕ್ಕೆ ಜನಸಾಗರವೇ ಆಗಮಿಸುತ್ತಿದ್ದು, ಜಾತ್ರಾ ಮಹೋತ್ಸವದ ವ್ಯವಸ್ಥೆಗಳು ಯೋಜನೆಯಂತೆ ಸುಗಮವಾಗಿ ನಡೆಯುತ್ತಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಶ್ಲಾಘಿಸಿದ್ದಾರೆ. ೧ ಸಾವಿರ ರೂಪಾಯಿ ಟಿಕೆಟ್ ದರ್ಶನವು ದಿನವಿಡೀ ೧೦ ನಿಮಿಷಕ್ಕಿಂತ ಕಡಿಮೆ ಸಮಯದಲ್ಲಿ ೩೦೦ ರೂಪಾಯಿ ಟಿಕೆಟ್ ದರ್ಶನವು ೧೦ ರಿಂದ ೩೦ ನಿಮಿಷಗಳಲ್ಲಿ ಪೂರ್ಣಗೊಳ್ಳುತ್ತಿದೆ. ಧರ್ಮ ದರ್ಶನವು ೩೦ ನಿಮಿಷಗಳಿಂದ ಗರಿಷ್ಠ ೨ ಗಂಟೆ ೩೦ ನಿಮಿಷಗಳಲ್ಲಿ ಆಗುತ್ತಿದ್ದು, ಎಲ್ಲಾ ವ್ಯವಸ್ಥೆಗಳು ಸುಸೂತ್ರವಾಗಿ ಸಾಗಿವೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ವೈಯಕ್ತಿಕವಾಗಿ ವ್ಯವಸ್ಥೆಗಳನ್ನು ಪರಿಶೀಲಿಸುತ್ತಿದ್ದಾರೆ. ಭಕ್ತರು ಸಾಧ್ಯವಾದರೆ ಇದೇ ೧೮ರ ಒಳಗೆಯೇ ಬಂದು ದರ್ಶನ ಪಡೆಯುವ ಮೂಲಕ ಸಹಕರಿಸಬೇಕು ಎಂದು ಸಚಿವರು ಮನವಿ ಮಾಡಿದ್ದಾರೆ

****************

ಕೊಡಗು ಹೋಟೇಲ್, ರೆಸಾರ್ಟ್ ಅಸೋಸಿಯೇಷನ್ ಹಾಗೂ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳ ಸಹಯೋಗದಲ್ಲಿ ಇದೇ ೧೫ ರಂದು ಬುಧವಾರ ಕೊಡಗು ಜಿಲ್ಲೆಯಾದ್ಯಂತ ಸ್ವಚ್ಛ ಕೊಡಗು - ಸುಂದರ ಕೊಡಗು - ತ್ಯಾಜ್ಯ ವಿಲೇವಾರಿ ಅಭಿಯಾನ ಆಯೋಜಿಸಲಾಗಿದೆ. ಜಿಲ್ಲೆಯ ಹಲವಾರು ಸಂಸ್ಥೆಗಳು ಈ ಸ್ವಚ್ಛತಾ ಅಭಿಯಾನಕ್ಕೆ ಕೈಜೋಡಿಸಿವೆ ಎಂದು ಕೂರ್ಗ್ ಹೋಟೇಲ್, ರೆಸಾರ್ಟ್ ಅಸೋಸಿಯೇಷನ್ ಅಧ್ಯಕ್ಷ ಕೆ. ದಿನೇಶ್ ಕಾರ್ಯಪ್ಪ ತಿಳಿಸಿದ್ದಾರೆ. ಕೊಡಗಿನಾದ್ಯಂತ ಮುಖ್ಯ ರಸ್ತೆಗಳ ಇಕ್ಕೆಲಗಳೂ ಸೇರಿದಂತೆ ಇತರ ರಸ್ತೆಗಳ ಬದಿಗಳಲ್ಲಿರುವ ತ್ಯಾಜ್ಯಗಳನ್ನು ಆ ವ್ಯಾಪ್ತಿಯಲ್ಲಿರುವ ರೆಸಾರ್ಟ್, ಹೋಟೇಲ್, ರೆಸ್ಟೋರೆಂಟ್, ವರ್ತಕರು, ಸಂಘ ಸಂಸ್ಥೆಗಳು, ಖಾಸಗಿ ಶಿಕ್ಷಣ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳ ಸಹಕಾರದಲ್ಲಿ ವಿಲೇವಾರಿ ಮಾಡಲಾಗುತ್ತದೆ. ಇದೇ ಮೊದಲ ಬಾರಿಗೆ ಕೊಡಗಿನಲ್ಲಿ ಇಂತಹ ಬೃಹತ್ ರೀತಿಯ ಸ್ವಚ್ಛತಾ ಅಭಿಯಾನ ಏಕದಿನ, ಏಕಕಾಲದಲ್ಲಿ ಆಯೋಜಿಸಲಾಗಿದೆ ಎಂದು ಹೇಳಿದ್ದಾರೆ.

****************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ತಿನ ಚುನಾವಣೆ ನಡೆಸುವ ಸಂಬಂಧ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ ಮಾಡಲು ನಮೂನೆ-೧೯ ರಲ್ಲಿ ಮತದಾರರ ಪಟ್ಟಿಯ ಸೇರ್ಪಡೆಗೆ ಅರ್ಜಿ ಸಲ್ಲಿಸಲು ನವೆಂಬರ್ ೬ ಕೊನೆಯ ದಿನವಾಗಿದೆ. ಮತದಾರರು ತಮ್ಮ ಹಕ್ಕು ಮತ್ತು ಆಕ್ಷೇಪಣಾ ಅರ್ಜಿಗಳನ್ನು ಸಲ್ಲಿಸಲು ನವೆಂಬರ್ ೨೫ ರಿಂದ ಡಿಸೆಂಬರ್ ೧೦ ವರೆಗೆ ಕಾಲಾವಕಾಶವಿದೆ. ಡಿಸೆಂಬರ್ ೩೦ ರಂದು ಅಂತಿಮ ಮತದಾರರ ಪಟ್ಟಿ ಬಿಡುಗಡೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****************

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಕಾರ್ಯದಲ್ಲಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಇಲ್ಲಿಯವರೆಗೆ ೩ ಲಕ್ಷ ೩೦

ಸಾವಿರದ ೨೮೮ ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಸಮೀಕ್ಷಾ ಕಾರ್ಯದಲ್ಲಿ ಇದುವರೆಗೂ ಶೇಕಡಾ ೯೮.೮೩ ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

***************

ದಾವಣಗೆರೆ ಜಿಲ್ಲಾಡಳಿತ, ನೆಹರು ಯುವ ಕೇಂದ್ರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಶ್ರಯದಲ್ಲಿ ಇದೇ ೧೫ ರಂದು ನಡೆಯಲಿರುವ ದಾವಣಗೆರೆ ಜಿಲ್ಲಾ ಮಟ್ಟದ ಯುವಜನೋತ್ಸವಕ್ಕೆ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಹರ್ಷ ತಿಳಿಸಿದ್ದಾರೆ. ಸ್ಪರ್ಧೆಯಲ್ಲಿ ೧೫ ರಿಂದ ೨೯ ವರ್ಷದೊಳಗಿನ ದಾವಣಗೆರೆ ಜಿಲ್ಲೆಯ ಯುವಕ, ಯುವತಿಯರು. ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಭಾಗವಹಿಸಬಹುದಾಗಿದೆ. ಇದೇ ೧೪ ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ಆಧಾರ್ ಕಾರ್ಡ್ ಮತ್ತು ಜನನ ಪ್ರಮಾಣ ಪತ್ರದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಹೆಸರುಗಳನ್ನು ನೋಂದಣಿ ಮಾಡಿಕೊಳ್ಳ ಬಹುದು ಎಂದು ಹೇಳಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ನಗರದ ಜಯಚಾಮರಾಜೇಂದ್ರ ವೃತ್ತದಲ್ಲಿ ನಗರಸಭೆ ವತಿಯಿಂದ ನಿರ್ಮಿಸಲಾಗಿರುವ ವರನಟ, ಪದ್ಮಭೂಷಣ ಡಾ.ರಾಜ್ ಕುಮಾರ್ ಅವರ ಕಂಚಿನ ಪುತ್ಥಳಿಯನ್ನು ನಟ ಡಾ.ಶಿವರಾಜ್ ಕುಮಾರ್ ಇಂದು ಅನಾವರಣಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ಪ್ರತಿಯೊಬ್ಬರಿಗೂ ಕನ್ನಡದ ಅಭಿಮಾನ ಇರಬೇಕು. ನಾಡು ನುಡಿ ಅಭಿಮಾನಕ್ಕೆ ಡಾ.ರಾಜ್‌ಕುಮಾರ್ ಪ್ರೇರಣೆಯಾಗಬೇಕು ಎಂದರು.

***************

ನವದೆಹಲಿಯ ಅರುಣ್ ಜೆಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡನೇ ಟೆಸ್ಟ್ ಕ್ರಿಕೆಟ್ ಪಂದ್ಯದ ಮೂರನೇ ದಿನದಾಟದಲ್ಲಿಂದು ಭಾರತದ ವಿರುದ್ಧ ವೆಸ್ಟ್ ಇಂಡೀಸ್ ಮೊದಲ ಇನ್ನಿಂಗ್ಸ್ ನಲ್ಲಿ ೮೧.೫ ಓವರ್ ಗಳಲ್ಲಿ ೨೪೮ ರನ್ ಗಳಿಗೆ ಎಲ್ಲಾ ವಿಕೆಟ್ ಕಳೆದುಕೊಂಡಿದೆ, ಇದರೊಂದಿಗೆ ಭಾರತ ೨೭೦ ರನ್ ಗಳ ಮುನ್ನಡೆ ದಾಖಲಿಸಿದೆ. ವೆಸ್ಟ್ ಇಂಡೀಸ್ ತಂಡ ವಿರುದ್ಧ ಭಾರತ ಫಾಲೋ ಆನ್ ಹೇರಿದೆ. ಭಾರತದ ಪರ ಕುಲದೀಪ್ ಯಾದವ್ ೫, ರವೀಂದ್ರ ಜಡೇಜಾ ೩ , ಜಸ್ಪ್ರೀತ್ ಬೂಮ್ರಾ ಹಾಗೂ ಮೊಹಮ್ಮದ್ ಸಿರಾಜ್ ತಲಾ ೧ ವಿಕೆಟ್ ಗಳಿಸಿದರು.

***************